ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ : ಇಡಿ/ಕೆಇಎ/ಆಡಳಿತ/ಸಿ.ಆರ್.56/2022-23 ದಿನಾಂಕ: 30.05.2023

ಪ್ರಕಟಣೆ

ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತದಲ್ಲಿನ ಸಹಾಯಕ ವ್ಯವಸ್ಥಾಪಕರು (ಕಾರ್ಯಚರಣೆ), ಹಿರಿಯ ಸಹಾಯಕರು, ಕಿರಿಯ ಸಹಾಯಕರು ಮತ್ತು ಬೀಜ ಸಹಾಯಕರು, ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಸಲ್ಲಿಸುವ ಬಗ್ಗೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ 11.05.2023 ರಂದು ಮೂಲ ದಾಖಲೆಗಳ ಪರಿಶೀಲನೆಯನ್ನು ನಡೆಸಲಾಗಿರುತ್ತದೆ. ಅದರಂತೆ ಒಟ್ಟು 92 ಅಭ್ಯರ್ಥಿಗಳಲ್ಲಿ 79 ಅಭ್ಯರ್ಥಿಗಳು ದಾಖಲಾತಿ ಪರಿಶೀಲನೆಗೆ ಹಾಜರಾಗಿರುತ್ತಾರೆ. ಅದರೆ ಗೈರುಹಾಜರಾದ ಅಭ್ಯರ್ಥಿಗಳಿಗೆ ದಿನಾಂಕ 26.05.2023 ರಂದು ಮತ್ತೊಂದು ಅವಕಾಶ ನೀಡಲಾಗಿರುತ್ತದೆ.

ಸಹಾಯಕ ವ್ಯವಸ್ಥಾಪಕರು (ಕಾರ್ಯಚರಣೆ), ಹಿರಿಯ ಸಹಾಯಕರು, ಕಿರಿಯ ಸಹಾಯಕರು ಮತ್ತು ಬೀಜ ಸಹಾಯಕರು, ಹುದ್ದೆಗಳ ನೇಮಕಾತಿಗೆ ಆಯ್ಕೆ ವಿಧಾನವನ್ನು ಸರ್ಕಾರದ ಸುತ್ತೋಲೆಯಂತೆ ಮತ್ತು ಸರ್ಕಾರದ ನೇಮಕಾತಿ ನಿಯಮಾವಳಿಗಳಂತೆ ಕ್ರಮವಹಿಸಿ ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತದಿಂದ ಒದಗಿಸಲಾದ ಹುದ್ದೆಗಳ ವರ್ಗಿಕರಣದಂತೆ, ಮೆರಿಟ್ ಹಾಗೂ ಮೀಸಲಾತಿ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ, ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ದಿನಾಂಕ 30.05.2023 ರಂದು ಪ್ರಕಟಿಸಲಾಗಿರುತ್ತದೆ.

ಪ್ರಾಧಿಕಾರವು ಪ್ರಕಟಿಸಲಾದ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ, ದಿನಾಂಕ 07.06.2023ರ ಸಂಜೆ 5.30 ರೊಳಗೆ, ಪೂರಕ ದಾಖಲೆಗಳೊಂದಿಗೆ ಅಂಚೆ ಮೂಲಕ ಅಥವಾ ಖುದ್ದಾಗಿ ಪ್ರಾಧಿಕಾರಕ್ಕೆ ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿರುತ್ತದೆ.

ಸಹಿ/-
ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru – 560 012.
Phone: 080-2356 4583, 2336 1786, Fax: 080-2346 1576
e-mail : keauthority-ka@nic.in Website : http://kea.kar.nic.in